# National
# Kannada
# 18.05.2025 / 1.10 pm

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

೧.ಪಾಕಿಸ್ತಾನದ ಜೊತೆ ಇಂದು ಡಿಜಿಎಮ್‌ಒ ಸಭೆ ಇಲ್ಲ; ಕದನವಿರಾಮಕ್ಕೆ ಕಾಲಮಿತಿಯಿಲ್ಲ - ಭಾರತೀಯ ಸೇನೆ ಸ್ಪಷ್ಟನೆ

೨.ಹೈದಾರಾಬಾದ್‌ನಲ್ಲಿ ಅಗ್ನಿ ಅವಘಡ; ಕನಿಷ್ಠ ೧೭ ಮಂದಿ ಸಾವು; ಪ್ರಧಾನಿ ತೀವ್ರ ಸಂತಾಪ, ಪರಿಹಾರ ಘೋಷಣೆ

೩.ಬ್ರೆಜಿಲ್‌ನಲ್ಲಿ ನಾಳೆ ಬ್ರಿಕ್ಸ್ ಇಂಧನ ಸಚಿವರ ಸಭೆ; ಭಾರತವನ್ನು ಪ್ರತಿನಿಧಿಸಲಿರುವ ಕೇಂದ್ರ ಸಚಿವ ಮನೋಹರ್ ಲಾಲ್

೪.ಐಪಿಎಲ್ ಟಿ-೨೦ ಕ್ರಿಕೆಟ್; ಇಂದು ರಾಜಸ್ಥಾನ್ ರಾಯಲ್ಸ್ - ಪಂಜಾಬ್ ಕಿಂಗ್ಸ್ ಹಾಗೂ ಡೆಲ್ಲಿ ಕ್ಯಾಪಿಟಲ್ಸ್ - ಗುಜರಾತ್ ಟೈಟನ್ಸ್ ಮುಖಾಮುಖಿ

*********

ಭಾರತ ಮತ್ತು ಪಾಕಿಸ್ತಾನದ ಮಿಲಿಟರಿ ಕಾರ್ಯಾಚರಣೆಗಳ ಮಹಾನಿರ್ದೇಶಕರು-ಡಿಜಿಎಂಒ ನಡುವಿನ ಯಾವುದೇ ಸಭೆ ಇಂದು ನಿಗದಿಯಾಗಿಲ್ಲ ಹಾಗೂ ಉಭಯ ದೇಶಗಳ ನಡುವಿನ ಕದನ ವಿರಾಮ ಈಗಲೂ ಮುಂದುವರಿದಿದ್ದು, ಇದಕ್ಕೆ ಯಾವುದೇ ಕಾಲಮಿತಿ ಇಲ್ಲ ಎಂದು ಭಾರತೀಯ ಸೇನೆ ಇಂದು ಸ್ಪಷ್ಟಪಡಿಸಿದೆ. ರಕ್ಷಣಾ ಸಚಿವಾಲಯ ಬಿಡುಗಡೆಗೊಳಿಸಿರುವ ಹೇಳಿಕೆಯಲ್ಲಿ, ಕೆಲವು ಮಾಧ್ಯಮಗಳು ಭಾರತ-ಪಾಕಿಸ್ತಾನ ಕದನ ವಿರಾಮ ಇಂದು ಅಂತ್ಯವಾಗುತ್ತಿದೆ ಎಂದು ತಪ್ಪು ವರದಿ ಮಾಡುತ್ತಿವೆ. ಇಂದು ಡಿಜಿಎಮ್‌ಒ ಮಟ್ಟದ ಮಾತುಕತೆ ನಡೆಯುತ್ತದೆಯೇ ಎಂಬ ಪ್ರಶ್ನೆಗಳೂ ಬಂದಿವೆ. ಆದರೆ, ಇಂದು ಯಾವುದೇ ಡಿಜಿಎಮ್‌ಒ ಸಭೆ ನಡೆಯುತ್ತಿಲ್ಲ. ಮೇ ೧೨ರಂದು ನಡೆದ ಡಿಜಿಎಮ್‌ಒಗಳ ಸಂವಾದದಲ್ಲಿ ಕದನ ವಿರಾಮ ಮುಂದುವರಿಸಲು ಒಪ್ಪಿಗೆ ನೀಡಲಾಗಿತ್ತು. ಇದಕ್ಕೆ ಯಾವುದೇ ಕಾಲಮಿತಿ ಇಲ್ಲ ಎಂದು ತಿಳಿಸಲಾಗಿದೆ. ಮೇ ೧೨ರಂದು ನಡೆದಿದ್ದ ಉಭಯ ದೇಶಗಳ ಡಿಜಿಎಮ್‌ಒಗಳ ಸಂವಾದದಲ್ಲಿ, ಪರಸ್ಪರ ಘರ್ಷಣೆ ತಡೆಗಟ್ಟಲು ಮತ್ತು ಕದನವಿರಾಮ ಕಾಯ್ದುಕೊಳ್ಳಲು ನಿರ್ಧಾರ ಮಾಡಲಾಗಿತ್ತು. ಈಗಾಗಲೇ ಪ್ರಧಾನಿ ನರೇಂದ್ರ ಮೋದಿ ಕದನವಿರಾಮ ಮುಂದುವರೆದಿದ್ದರೂ ಪಾಕಿಸ್ತಾನದೊಂದಿಗಿನ ವ್ಯಾಪಾರ ಮತ್ತು ಸಿಂಧು ಜಲ ಒಪ್ಪಂದ ಮುಂದುವರಿಯುವುದಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ಇನ್ನು, ದೇಶಾದ್ಯಂತ ಭದ್ರತಾ ಪಡೆಗಳು ಹೆಚ್ಚು ಜಾಗರೂಕತೆಯನ್ನು ಕಾಯ್ದುಕೊಂಡಿವೆ. ಭಯೋತ್ಪಾದಕರು, ಭೂಗತ ಕಾರ್ಯಕರ್ತರು ಮತ್ತು ಅವರ ಬೆಂಬಲಿಗರ ವಿರುದ್ಧ ಕಠಿಣ ನಿಗಾ ಮತ್ತು ಕ್ರಮ ಜಾರಿಗೆ ಪೊಲೀಸ್ ಮತ್ತು ಭದ್ರತಾ ಪಡೆಗಳಿಗೆ ಸೂಚನೆ ನೀಡಲಾಗಿದೆ.

ಹೈದರಾಬಾದ್‌ನ ಚಾರ್ಮಿನಾರ್ ಬಳಿಯ ಗುಲ್ಜಾರ್ ಹೌಸ್ ಬಳಿಯ ವಸತಿ ಪ್ರದೇಶದಲ್ಲಿ ಇಂದು ಬೆಳಿಗ್ಗೆ ಸಂಭವಿಸಿದ ಬೆಂಕಿ ಅವಘಡದಲ್ಲಿ ಕನಿಷ್ಠ ೧೭ ಮಂದಿ ಮೃತಪಟ್ಟಿದ್ದಾರೆ. ಹಲವರು

ಗಾಯಗೊಂಡಿದ್ದು, ಚಿಕಿತ್ಸೆಗಾಗಿ ಸಮೀಪದ ಆಸ್ಪತ್ರೆಗಳಿಗೆ ಸ್ಥಳಾಂತರಿಸಲಾಗಿದೆ. ಒಂಬತ್ತು ಜನರ ಸ್ಥಿತಿ ಗಂಭೀರವಾಗಿದೆ ಎಂದು ವರದಿಯಾಗಿದೆ. ೧೧ ಅಗ್ನಿಶಾಮಕ ದಳದ ವಾಹನಗಳನ್ನು ತಕ್ಷಣವೇ ಸೇವೆಗೆ ನಿಯೋಜಿಸಲಾಗಿದೆ. ಸಾವಿನ ಸಂಖ್ಯೆ ಮತ್ತಷ್ಟು ಹೆಚ್ಚಾಗುವ ಸಾಧ್ಯತೆಯಿದೆ. ಅಗ್ನಿಶಾಮಕ ಸಿಬ್ಬಂದಿ ಕಟ್ಟಡದಿಂದ ೧೬ ಜನರನ್ನು ರಕ್ಷಿಸಿದ್ದಾರೆ. ಬೆಂಕಿ ಅವಘಡಕ್ಕೆ ಕಾರಣ ಇನ್ನೂ ತಿಳಿದುಬಂದಿಲ್ಲ ಮತ್ತು ತನಿಖೆ ಆರಂಭಿಸಲಾಗಿದೆ ಎಂದು ಸ್ಥಳೀಯ ಸಂಸ್ಥೆ ವರದಿ ಮಾಡಿದೆ. ಕೇಂದ್ರ ಕಲ್ಲಿದ್ದಲು ಗಣಿ ಸಚಿವ ಜಿ.ಕಿಶನ್ ರೆಡ್ಡಿ ಘಟನಾ ಸ್ಥಳಕ್ಕೆ ಭೇಟಿ ನೀಡಿ ಸಂತ್ರಸ್ತ ಕುಟುಂಬಗಳಿಗೆ ಎಲ್ಲಾ ಸಹಾಯ ಒದಗಿಸುವ ಭರವಸೆ ನೀಡಿದ್ದಾರೆ. ಸಂತ್ರಸ್ತರಿಗೆ ಉತ್ತಮ ವೈದ್ಯಕೀಯ ನೆರವು ನೀಡಲು ಎಲ್ಲಾ ಕ್ರಮಗಳನ್ನು ತೆಗೆದುಕೊಳ್ಳುವಂತೆ ಮುಖ್ಯಮಂತ್ರಿ ರೇವಂತ್ ರೆಡ್ಡಿ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ. ಅಗ್ನಿ ದುರಂತದಲ್ಲಿ ಮೃತಪಟ್ಟವರ ಬಗ್ಗೆ ಪ್ರಧಾನಿ ನರೇಂದ್ರ ಮೋದಿ ತೀವ್ರ ಸಂತಾಪ ಸೂಚಿಸಿದ್ದಾರೆ. ಈ ಕುರಿತು ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ, ಪ್ರಧಾನ ಮಂತ್ರಿ ರಾಷ್ಟ್ರೀಯ ಪರಿಹಾರ ನಿಧಿಯಿಂದ ಮೃತರ ಸಂಬಂಧಿಕರಿಗೆ ಎರಡು ಲಕ್ಷ ರೂಪಾಯಿ ಮತ್ತು ಗಾಯಗೊಂಡವರಿಗೆ ೫೦ ಸಾವಿರ ರೂಪಾಯಿ ಪರಿಹಾರ ನೀಡಲಾಗುವುದು ಎಂದು ಹೇಳಿದ್ದಾರೆ. ಗಾಯಾಳುಗಳು ಬೇಗ ಚೇತರಿಸಿಕೊಳ್ಳಲಿ ಎಂದು ಪ್ರಧಾನಿ ಹಾರೈಸಿದ್ದಾರೆ.

*********

---

ಬ್ರೆಜಿಲ್‌ನಲ್ಲಿ ನಾಳೆ ನಡೆಯಲಿರುವ ಬ್ರಿಕ್ಸ್ ಇಂಧನ ಸಚಿವರ ಸಭೆಯಲ್ಲಿ ಕೇಂದ್ರ ವಿದ್ಯುತ್ ಸಚಿವ ಮನೋಹರ್ ಲಾಲ್ ಭಾರತವನ್ನು ಪ್ರತಿನಿಧಿಸಲಿದ್ದಾರೆ. ಈ ಸಭೆಯಲ್ಲಿ, ಇಂಧನ ಭದ್ರತೆ, ಪ್ರವೇಶಸಾಧ್ಯತೆ, ಕೈಗೆಟುಕುವಿಕೆ ಮತ್ತು ಸುಸ್ಥಿರತೆಯಂತಹ ನಿರ್ಣಾಯಕ ವಿಷಯಗಳ ಕುರಿತು ಸಚಿವರು ಬ್ರಿಕ್ಸ್ ರಾಷ್ಟ್ರಗಳ ಇಂಧನ ಸಚಿವರೊಂದಿಗೆ ಚರ್ಚೆ ನಡೆಸಲಿದ್ದಾರೆ. ವಿದ್ಯುತ್ ಸಾಮರ್ಥ್ಯದಲ್ಲಿ ಶೇಕಡಾ ೯೦ ರಷ್ಟು ಹೆಚ್ಚಳ, ನವೀಕರಿಸಬಹುದಾದ ಇಂಧನದಲ್ಲಿ ನಾಯಕತ್ವ, ಹಸಿರು ಹೈಡ್ರೋಜನ್ ಮತ್ತು ಜೈವಿಕ ಇಂಧನಗಳು, ಹಾಗೆಯೇ ನಾವೀನ್ಯತೆಗಳು ಮತ್ತು ಇಂಧನ ವಲಯದಲ್ಲಿ ಸುಸ್ಥಿರ ಅಭಿವೃದ್ಧಿ ಕುರಿತಂತೆ ಈ ಸಭೆಯಲ್ಲಿ ಚರ್ಚೆ ನಡೆಯಲಿದೆ ಎಂದು ವಿದ್ಯುತ್ ಸಚಿವಾಲಯ ತಿಳಿಸಿದೆ. ಈ ವರ್ಷದ ಬ್ರಿಕ್ಸ್ ಇಂಧನ ಸಚಿವರ ಸಭೆಯ ವಿಷಯವೆಂದರೆ 'ಸಮಗ್ರ ಮತ್ತು ಸುಸ್ಥಿರ ಜಾಗತಿಕ ಆಡಳಿತಕ್ಕಾಗಿ ಜಾಗತಿಕ ದಕ್ಷಿಣ ಸಹಕಾರವನ್ನು ಸಬಲೀಕರಣಗೊಳಿಸುವುದು' ಎಂಬುದಾಗಿದೆ.

*********

ಸ್ವಾವಲಂಬಿ ಭಾರತದ ಸೇನೆಯ ಶಕ್ತಿ ಮತ್ತು ಆಪರೇಷನ್ 'ಸಿಂದೂರ' ಮೂಲಕ 'ಮೇಕ್ ಇನ್ ಇಂಡಿಯಾ' ಉಪಕ್ರಮದ ಯಶಸ್ಸನ್ನು ಇಡೀ ಜಗತ್ತು ನೋಡಿದೆ ಎಂದು ಮಹಾರಾಷ್ಟ್ರ ಮುಖ್ಯಮಂತ್ರಿ ದೇವೇಂದ್ರ ಫಡ್ನವೀಸ್ ಹೇಳಿದ್ದಾರೆ. ನಾಗ್ಪುರ ಜಿಲ್ಲೆಯ ಖಪರ್ಖೇಡಾ ಪಂಚಾಯತ್ ವ್ಯಾಪ್ತಿಯಲ್ಲಿಂದು ಆಯೋಜಿಸಲಾದ ತಿರಂಗ ಯಾತ್ರೆಯ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜಾಗತಿಕ ವೇದಿಕೆಯಲ್ಲಿ ಭಾರತದ ರಕ್ಷಣಾ ಪಡೆಗಳ ಹೆಚ್ಚುತ್ತಿರುವ ಪ್ರಾಮುಖ್ಯತೆ ಬಗ್ಗೆ ಒತ್ತಿ ಹೇಳಿದರು. ಸ್ಥಳೀಯವಾಗಿ ಅಭಿವೃದ್ಧಿಪಡಿಸಿದ 'ಮೇಕ್ ಇನ್ ಇಂಡಿಯಾ' ಶಸ್ತ್ರಾಸ್ತ್ರಗಳಿಂದಾಗಿ ಭಾರತದ ರಕ್ಷಣಾ ಸಾಮರ್ಥ್ಯಗಳು ಹೆಚ್ಚು ಬೇಡಿಕೆಯಲ್ಲಿವೆ.

*********

ಆಪರೇಷನ್ ’ಸಿಂದೂರ್’ ಹಿನ್ನೆಲೆಯಲ್ಲಿ ಭಯೋತ್ಪಾದನೆಯನ್ನು ಎದುರಿಸುವ ಭಾರತದ ಸಂಕಲ್ಪವನ್ನು ತಿಳಿಸಲು ೫೯ ಸಂಸತ್ ಸದಸ್ಯರನ್ನು ಒಳಗೊಂಡ ಏಳು ಸರ್ವಪಕ್ಷ ನಿಯೋಗಗಳು, ಒಟ್ಟು ೩೨ ದೇಶಗಳಿಗೆ ಮತ್ತು ಬೆಲ್ಜಿಯಂನ ಬ್ರುಸೆಲ್ಸ್‌ನಲ್ಲಿರುವ ಐರೋಪ್ಯ ಒಕ್ಕೂಟದ ಪ್ರಧಾನ ಕಚೇರಿಗೆ ಭೇಟಿ ನೀಡಲಿವೆ ಎಂದು ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ತಿಳಿಸಿದ್ದಾರೆ. ಈ ಕುರಿತು ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಮಾಹಿತಿ ಹಂಚಿಕೊಂಡಿರುವ ಸಚಿವರು, ಈ ಸಂಯುಕ್ತ ಪ್ರಯತ್ನವನ್ನು ಪ್ರತಿನಿಧಿಸುವ ಸಂಸದರು ಮತ್ತು ನಿಯೋಗಗಳ ಪಟ್ಟಿಯನ್ನು ಹಂಚಿಕೊಂಡಿದ್ದಾರೆ. ಬಿಜೆಪಿ ಸಂಸದ ಬೈಜಯಂತ್ ಪಾಂಡಾ ನೇತೃತ್ವದ ಮೊದಲ ನಿಯೋಗ, ಸೌದಿ ಅರೇಬಿಯಾ, ಬಹ್ರೇನ್, ಕುವೈತ್ ಮತ್ತು ಅಲ್ಜೀರಿಯಾಕ್ಕೆ ಭೇಟಿ ನೀಡಲಿದೆ. ಬಿಜೆಪಿ ಸಂಸದ ರವಿಶಂಕರ್ ಪ್ರಸಾದ್ ನೇತೃತ್ವದ ಎರಡನೇ ನಿಯೋಗ, ಬ್ರಿಟನ್, ಫ್ರಾನ್ಸ್, ಜರ್ಮನಿ, ಐರೋಪ್ಯ, ಒಕ್ಕೂಟ ರಾಷ್ಟ್ರಗಳು ಮತ್ತು ಡೆನ್ಮಾರ್ಕ್‌ಗೆ ಭೇಟಿ ನೀಡಲಿದ್ದಾರೆ. ಜೆಡಿಯು ಸಂಸದ ಸಂಜಯ್ ಕುಮಾರ್ ಝಾ ನೇತೃತ್ವದ ಮೂರನೇ ನಿಯೋಗ, ಇಂಡೋನೇಷ್ಯಾ, ಮಲೇಷ್ಯಾ, ದಕ್ಷಿಣ ಕೊರಿಯಾ, ಜಪಾನ್ ಮತ್ತು ಸಿಂಗಾಪುರಕ್ಕೆ ಭೇಟಿ ನೀಡಲಿದೆ. ಶಿವಸೇನಾ ಸಂಸದ ಶ್ರೀಕಾಂತ್ ಏಕನಾಥ್ ಶಿಂಧೆ ನೇತೃತ್ವದ ನಾಲ್ಕನೇ ನಿಯೋಗವು, ಯುಎಇ, ಲೈಬೀರಿಯಾ, ಕಾಂಗೋ ಮತ್ತು ಸಿಯೆರಾ ಲಿಯೋನ್‌ಗಳಿಗೆ ಭೇಟಿ ನೀಡಲಿದೆ.

*********

ಕಾಂಗ್ರೆಸ್ ಸಂಸದ ಶಶಿ ತರೂರ್ ನೇತೃತ್ವದ ಐದನೇ ನಿಯೋಗವು ಅಮೆರಿಕ, ಪನಾಮ, ಗಯಾನಾ, ಬ್ರೆಜಿಲ್ ಮತ್ತು ಕೊಲಂಬಿಯಾಕ್ಕೆ ಭೇಟಿ ನೀಡಲಿದೆ. ಡಿಎಂಕೆ ಸಂಸದ ಕನಿಮೋಳಿ ಕರುಣಾನಿಧಿ ನೇತೃತ್ವದ ಆರನೇ ನಿಯೋಗವು, ಸ್ಪೇನ್, ಗ್ರೀಸ್, ಸ್ಲೋವೇನಿಯಾ, ಲಾಟ್ವಿಯಾ ಮತ್ತು ರಷ್ಯಾಕ್ಕೆ ಭೇಟಿ ನೀಡಲಿದೆ. ಎನ್‌ಸಿಪಿ (ಎಸ್‌ಸಿಪಿ) ಸಂಸದೆ ಸುಪ್ರಿಯಾ ಸುಳೆ ನೇತೃತ್ವದ ಏಳನೇ ನಿಯೋಗ, ಈಜಿಪ್ಟ್, ಕತಾರ್, ಇಥಿಯೋಪಿಯಾ ಮತ್ತು ದಕ್ಷಿಣ ಆಫ್ರಿಕಾಕ್ಕೆ ಭೇಟಿ ನೀಡಲಿದೆ ಎಂದು ಸಚಿವ ಕಿರಣ್ ರಿಜಿಜು ಮಾಹಿತಿ ನೀಡಿದ್ದಾರೆ.

*********

ಅಮೆರಿಕದ ಕ್ಯಾಲಿಫೋರ್ನಿಯಾದ ಪಾಮ್ ಸ್ಪ್ರಿಂಗ್ಸ್ ನಗರದ ಆಸ್ಪತ್ರೆಯ ಆವರಣದಲ್ಲಿ ಸಂಭವಿಸಿದ ಸ್ಫೋಟದಲ್ಲಿ ಓರ್ವ ವ್ಯಕ್ತಿ ಮೃತಪಟ್ಟಿದ್ದು, ಐದು ಮಂದಿ ಗಾಯಗೊಂಡಿದ್ದಾರೆ. ಈ ಸ್ಫೋಟವು ಗಮನಾರ್ಹ ಹಾನಿಯನ್ನುಂಟುಮಾಡಿದ್ದು, ಹಲವಾರು ಕಟ್ಟಡಗಳ ಮೇಲೆ ಪರಿಣಾಮ ಬೀರಿದೆ. ಕಾನೂನು ಜಾರಿ ಅಧಿಕಾರಿಗಳ ಪ್ರಕಾರ, ಸ್ಫೋಟಕ್ಕೆ ಕಾರಣ ಎಂದು ನಂಬಲಾದ ವ್ಯಕ್ತಿ ಸ್ಥಳದಲ್ಲೇ ಸಾವನ್ನಪ್ಪಿದ್ದಾನೆ. ನಿನ್ನೆ ಸಂಜೆ ಪತ್ರಿಕಾಗೋಷ್ಠಿಯಲ್ಲಿ, ಫೆಡರಲ್ ಬ್ಯೂರೋ ಆಫ್ ಇನ್ವೆಸ್ಟಿಗೇಷನ್-ಎಫ್‌ಬಿಐ ಅಧಿಕಾರಿ ಅಕಿಲ್ ಡೇವಿಸ್ ಈ ಘಟನೆಯನ್ನು ಉದ್ದೇಶಪೂರ್ವಕ ಭಯೋತ್ಪಾದನಾ ಕೃತ್ಯ ಎಂದು ಹೇಳಿದ್ದಾರೆ.

*********

ವಿದೇಶಿ ವ್ಯಾಪಾರ ನಿರ್ದೇಶನಾಲಯ, ಬಾಂಗ್ಲಾದೇಶದಿಂದ ಭಾರತಕ್ಕೆ ಕೆಲವು ಸರಕುಗಳ ಆಮದು ಮೇಲೆ ಹೊಸ ಬಂದರು ನಿರ್ಬಂಧಗಳನ್ನು ಪ್ರಕಟಿಸಿದೆ. ಈ ನಿರ್ಬಂಧಗಳು ಭಾರತದ ಮೂಲಕ ಸಾಗುವ ಮತ್ತು ನೇಪಾಳ ಹಾಗೂ ಭೂತಾನ್‌ಗೆ ಉದ್ದೇಶಿಸಲಾದ ಬಾಂಗ್ಲಾದೇಶದ ಸರಕುಗಳಿಗೆ ಅನ್ವಯಿಸುವುದಿಲ್ಲ ಎಂದು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವಾಲಯವು ಅಧಿಸೂಚನೆಯಲ್ಲಿ ಸ್ಪಷ್ಟಪಡಿಸಿದೆ. ಆದಾಗ್ಯೂ, ಹೊಸ ಬಂದರು ನಿರ್ಬಂಧಗಳು ಬಾಂಗ್ಲಾದೇಶದಿಂದ ಮೀನು, ಎಲ್‌ಪಿಜಿ, ಖಾದ್ಯ ತೈಲ ಮತ್ತು ಪುಡಿಮಾಡಿದ ಕಲ್ಲುಗಳ ಆಮದಿಗೆ ಅನ್ವಯಿಸುವುದಿಲ್ಲ.

*********

ಮಲೇಷ್ಯಾದ ಲಂಕಾವಿಯಲ್ಲಿ ಇದೇ ೨೪ ರವರೆಗೆ ನಡೆಯಲಿರುವ ೧೭ ನೇ ಆವೃತ್ತಿಯ ಲಂಕಾವಿ ಅಂತರರಾಷ್ಟ್ರೀಯ ಸಮುದ್ರ ಮತ್ತು ಬಾಹ್ಯಾಕಾಶ ಪ್ರದರ್ಶನ- ಲಿಮಾ೨೦೨೫ರ ಭಾರತೀಯ ನಿಯೋಗದ ನೇತೃತ್ವವನ್ನು ರಕ್ಷಣಾ ಖಾತೆ ರಾಜ್ಯ ಸಚಿವ ಸಂಜಯ್ ಸೇಠ್ ವಹಿಸಲಿದ್ದಾರೆ. ಲಿಮಾ-೨೦೨೫ ರಲ್ಲಿ ಸ್ಥಾಪಿಸಲಾದ ಭಾರತೀಯ ಮಂಟಪವನ್ನು ಅವರು ಉದ್ಘಾಟಿಸಲಿದ್ದಾರೆ. ಭೇಟಿಯ ಸಮಯದಲ್ಲಿ ಸೇಠ್ ಮಲೇಷ್ಯಾದ ರಕ್ಷಣಾ ಸಚಿವ ಡಾಟೊ ಸೆರಿ ಮೊಹಮ್ಮದ್ ಖಲೀದ್ ಬಿನ್ ನಾರ್ಡಿನ್ ಅವರನ್ನು ಸಹ ಭೇಟಿ ಮಾಡಲಿದ್ದಾರೆ. ಈ ಭೇಟಿಯು ದ್ವಿಪಕ್ಷೀಯ ರಕ್ಷಣಾ ಸಹಕಾರ ಮತ್ತು ಸಮಗ್ರ ಕಾರ್ಯತಂತ್ರದ ಪಾಲುದಾರಿಕೆಯನ್ನು ಮತ್ತಷ್ಟು ಬಲಪಡಿಸುತ್ತದೆ ಎಂದು ರಕ್ಷಣಾ ಸಚಿವಾಲಯ ತಿಳಿಸಿದೆ.

*********

ಇಂಡಿಯನ್ ಪ್ರೀಮಿಯರ್ ಲೀಗ್ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯಾವಳಿಯಲ್ಲಿಂದು ಎರಡು ಪಂದ್ಯಗಳು ನಡೆಯಲಿದ್ದು, ಜೈಪುರದಲ್ಲಿ ನಡೆಯಲಿರುವ ದಿನದ ಮೊದಲ ಪಂದ್ಯದಲ್ಲಿ ರಾಜಸ್ಥಾನ್ ರಾಯಲ್ಸ್ ಮತ್ತು ಪಂಜಾಬ್ ಕಿಂಗ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ಅಪರಾಹ್ನ ೩.೩೦ ಕ್ಕೆ ಆರಂಭವಾಗಲಿದೆ.  ದೆಹಲಿಯ ಅರುಣ್ ಜೇಟ್ಲಿ ಕ್ರೀಡಾಂಗಣದಲ್ಲಿ ನಡೆಯಲಿರುವ ಎರಡನೇ ಪಂದ್ಯದಲ್ಲಿ ಡೆಲ್ಲಿ ಕ್ಯಾಪಿಟಲ್ಸ್ ಮತ್ತು ಗುಜರಾತ್ ಟೈಟನ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ಸಂಜೆ ೭.೩೦ಕ್ಕೆ ಆರಂಭವಾಗಲಿದೆ. ಬೆಂಗಳೂರಿನ ಎಂ.ಚಿನ್ನಸ್ವಾಮಿ ಕ್ರಿಡಾಂಗಣದಲ್ಲಿ ಕಳೆದ ರಾತ್ರಿ ನಡೆಯಬೇಕಿದ್ದ ರಾಯಲ್ ಚಾಲೆಂಜರ್ಸ್ ಬೆಂಗಳೂರು ಹಾಗೂ ಕೋಲ್ಕತ್ತಾ ನೈಟ್ ರೈಡರ್ಸ್ ತಂಡಗಳ ನಡುವಿನ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯ ಮಳೆಯಿಂದಾಗಿ ಒಂದೂ ಎಸೆತ  ಕಾಣದೆ ರದ್ದುಗೊಂಡಿತು.

*********